**ಓ.ಎಸ್. ನಂ. 9/2024** **ಪಿ.ಡಬ್ಲ್ಯೂ- 1**

**ಸಾಕ್ಷಿಯನ್ನು ದಿನಾಂಕ 23.10.2024 ರಂದು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಾನು ಹಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದೇನೆ. ದಿನಾಂಕ 23.5.2021 ರ ನೋಂದಾಯಿತ ಕ್ರಯದ ಕರಾರುಪತ್ರವನ್ನು ನಿಪಿ1 ಎಂದು ಗುರುತಿಸಲಾಯಿತು. ಸದರಿ ದಾಖಲೆಯನ್ನು 1 ಮತ್ತು 2 ನೇ ಪ್ರತಿವಾದಿಯರು ಅವರ ಪರವಾಗಿ ಮತ್ತು ಅಪ್ರಾಪ್ತ ಮಕ್ಕಳಾದ 3 ಮತ್ತು 4 ನೇ ಪ್ರತಿವಾದಿಯರ ಪರವಾಗಿ ಸಹ ಬರೆದುಕೊಟ್ಟಿರುತ್ತಾರೆ. ಸಾಕ್ಷಿದಾರರು 1 ಮತ್ತು 2 ನೇ ಪ್ರತಿವಾದಿಯರ ಎಲ್ಲಾ ಪುಟಗಳಲ್ಲಿರುವ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ1 ಎ ಮತ್ತು ನಿಪಿ1 ಬಿ ಎಂದು ಗುರುತಿಸಲಾಯಿತು. ಸಾಕ್ಷಿದಾರರು ನಿಪಿ1 ರ ಎಲ್ಲಾ ಪುಟಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ1 ಸಿ ಎಂದು ಗುರುತಿಸಲಾಯಿತು. ದಾವಆಸ್ತಿಗೆ ಸಂಬಂಧಿಸಿದ ಒಂದು ಪಹಣಿಯನ್ನು ನಿಪಿ2 ಎಂದು, ದಿನಾಂಕ 20.12.2023 ರಂದು ಪ್ರತಿವಾದಿಯರಿಗೆ ವಕೀಲರ ಮೂಲಕ ನೀಡಿರುವ ನೋಟಿಸಿನ ಕಛೇರಿ ಪ್ರತಿಯನ್ನು ನಿಪಿ3 ಎಂದು, ಎರಡು ಅಂಚೆ ರಶೀದಿಗಳನ್ನು ನಿಪಿ4 ಮತ್ತು ನಿಪಿ5 ಎಂದು, ಒಂದು ಅಂಚೆ ಸ್ವೀಕೃತಿಯನ್ನು ನಿಪಿ6 ಎಂದು, 2 ನೇ ಪ್ರತಿವಾದಿಯು ಸದರಿ ನೋಟಿಸನ್ನು ಸ್ವೀಕರಿಸದೇ ವಾಪಸ್ ಬಂದಿದ್ದು ಅದನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಲಾಗಿ ಸದರಿ ಅಂಚೆ ಕವರನ್ನು ನಿಪಿ7 ಎಂದು, ಅದರಲ್ಲಿರುವ ನೋಟಿಸಿನ ಪ್ರತಿಯನ್ನು ನಿಪಿ7 ಎ ಎಂದು, ಪ್ರತಿವಾದಿಯರು ಸದರಿ ನೋಟಿಸಿಗೆ ನೀಡಿರುವ ಪ್ರತ್ಯುತ್ತರವನ್ನು ನಿಪಿ8 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.